ಸಿವಿಲ್ ನ್ಯಾಯಾಧೀಶರ ಮತ್ತು ಪ್ರ.ದ.ನ್ಯಾ.ದಂಡಾಧಿಕಾರಿಗಳ ನ್ಯಾಯಾಲಯ ಔರಾದ(ಬಿ)
ಸಿ.ಸಿ. ನಂ. 334/2017

**ಚಾಸಾ–3 ಪ್ರಾಸಾ–3**

ದಿನಾಂಕ 09–01–2023 ರಂದು ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

| | | |
|---|---|---|
| ಹೆಸರು | ಃ | ಲಕ್ಷ್ಮಣ ಪಾಟೀಲ |
| ತಂದೆಯ ಹೆಸರು | ಃ | ವೆಂಕಟರಾವ |
| ವಯಸ್ಸು | ಃ | 50 ವರ್ಷ |
| ಉದ್ಯೋಗ | ಃ | ಒಕ್ಕಲುತನ |
| ವಾಸ ಸ್ಥಳ | ಃ | ದಾಬಕಾ |

**ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ ಃ–**

1. ನನಗೆ ಚಾಸಾ 2 ನನ್ನ ಸಹೋದರನಾಗಬೇಕು. ನ್ಯಾಯಾಲಯದ ಮುಂದೆ ಇರುವ ಆರೋಪಿತರ ಪರಿಚಯ ಇರುತ್ತದೆ. ಚಾಸಾ–1 ರವರು ನನ್ನ ಕಾಕಾನಾಗಬೇಕು. ಪೋಲಿಸರು ನನ್ನನ್ನು ಸ್ಥಳ ಪಂಚನಾಮೆ ಕುರಿತು ಎಲ್ಲಿಗೂ ಕರೆಸಿಲ್ಲ. ನನ್ನ ಸಮಕ್ಷಮ ಸ್ಥಳ ಪಂಚನಾಮೆ ಮಾಡಿಲ್ಲ. ಸುಮಾರು 5–6 ವರ್ಷಗಳ ಹಿಂದೆ ನಾನು ಹೋಟೆಲ್ ನಲ್ಲಿದ್ದಾಗ ಪೋಲಿಸರು ಒಂದು ದಾಖಲೆಯ ಮೇಲೆ ನನ್ನ ಸಹಿ ಪಡೆದಿರುತ್ತಾರೆ. (ಸದರಿ ಸಹಿ ನೋಡಿ ಗುರುತಿಸಿದ್ದು ಅದು ಗುನ್ನೆ ಸ್ಥಳ ಪಂಚನಾಮೆಯಾಗಿದ್ದು ಅದನ್ನು ಈಗಾಗಲೇ ನಿ.ಪಿ 4 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿ.ಪಿ 4(ಬಿ) ಎಂದು ಗುರುತಿಸಲಾಯಿತು. ನಿ.ಪಿ 4 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಮಾನ್ಯ ಸಸಅ ರವರು ಸಾಕ್ಷಿಗೆ ಪ್ರತಿಕೂಲ ಸಾಕ್ಷಿ ಅಂತ ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿಸಬೇಕು ಎಂದು ಕೇಳಿಕೊಂಡಿದ್ದರಿಂದ ಅನುಮತಿಸಲಾಗಿದೆ.)

**ಪಾಟೀ ಸವಾಲು ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ ಃ–**

1. ದಿನಾಂಕ 16–07–2016 ರಂದು ಪೋಲಿಸರು ನನ್ನನ್ನು ಮತ್ತು ಚಾಸಾ 2 ರವರನ್ನು ಗುನ್ನೆ ಸ್ಥಳಕ್ಕೆ ಕರೆಸಿ ಅಲ್ಲಿ ಚಾಸಾ 1 ರವರು ತೋರಿಸಿದಂತೆ ಗುನ್ನೆ

ಸ್ಥಳವನ್ನು ಪರಿಶೀಲಿಸಿ 10.00 ರಿಂದ 1.00 ಗಂಟೆಯವರೆಗೆ ನಮ್ಮ ಸಮಕ್ಷಮ ನಿ.ಪಿ 4 ರಂತೆ ವಿವರವಾಗಿ ಸ್ಥಳ ಪಂಚನಾಮೆ ಮಾಡಿ ಅದನ್ನು ನನಗೆ ಓದಿ ತಿಳಿಸಿ ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಈ ಎಲ್ಲಾ ವಿಚಾರಗಳು ನನಗೆ ಗೊತ್ತಿದ್ದರು ಸಹ ಆರೋಪಿತರಿಗೆ ಅನುಕೂಲವಾಗಲೆಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು ಆರೋಪಿತರ ಪರ ವಕೀಲರಿಂ ದಃ–**

ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲವೆಂದು ಹೇಳಿರುತ್ತಾರೆ.

(ನನ್ನ ಉಕ್ತಲೇಖನದ ಪ್ರಕಾರ ಮುಕ್ತ ನ್ಯಾಯಾಲಯದಲ್ಲಿ ಗ್ಪಣಕೀಕೃತಗೊಳಿಸಲಾಯಿತು)

ಓ. ಹೆ. ಕೆ. ಸರಿ ಇದೆ.

ಪ್ರ:ದ:ನ್ಯಾ:ದಂ.ಗಳು, ಔರಾ ದ್.